ಕರ್ನಾಟಕ ಸರ್ಕಾರ

**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, ಮಲ್ಲೇಶ್ವರಂ, ಬೆಂಗಳೂರು-560 003.**

ಸಂಖ್ಯೆ:ಕಶಾಪ&ಮೌನಿಮಂ:ಪಿಯುಸಿ.ಪ.ಶು:ವಿಸ್ತರಣೆ:1/2022-23 ದಿನಾಂಕ:04-05-2023

**ಸು ತ್ತೋ ಲೆ**

ವಿಷಯ: 2023ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಪರೀಕ್ಷಾ ಶುಲ್ಕ ಪಾವತಿಸಲು ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಸುತ್ತೋಲೆ ಕಶಾಪ&ಮೌನಿಮಂ:ಪೂಪಪು.ನೋ:2022-23 ದಿನಾಂಕ: 21-04-2023.

---

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ 2023ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಪರೀಕ್ಷಾ ಶುಲ್ಕವನ್ನು ಪಾವತಿಸಲು ಉಲ್ಲೇಖಿತ ಸುತ್ತೋಲೆಯ ಪ್ರಕಾರ ದಿನಾಂಕ 02/05/2023 ರವರೆಗೆ ನಿಗದಿಪಡಿಸಲಾಗಿತ್ತು. ವಿದ್ಯಾರ್ಥಿಗಳು ಹಾಗೂ ಪೋಷಕರ ಮನವಿಗಳ ಮೇರೆಗೆ ಪರೀಕ್ಷಾ ಶುಲ್ಕವನ್ನು ಪಾವತಿಸಲು **ದಿನಾಂಕ 04/05/2023 ರಿಂದ 06/05/2023 ರವರೆಗೆ ವಿಸ್ತರಿಸಲಾಗಿದೆ.**

ದಿನಾಂಕ: 2/5/2023 ರವರೆಗೆ ನಿಗದಿಪಡಿಸಲಾಗಿದ್ದ ಪರೀಕ್ಷಾ ಶುಲ್ಕ ಹಾಗೂ ದಂಡ ಶುಲ್ಕದೊಂದಿಗೆ ದಿನಾಂಕ: 04/05/2023 ರಿಂದ ಅನ್ವಯವಾಗುವಂತೆ ಪ್ರತಿ ದಿನ ರೂ. 50/- ರಂತೆ ದಂಡ ಶುಲ್ಕ ಪಾವತಿಸಲು ಕ್ರಮ ವಹಿಸುವುದು. ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರುಗಳು ಪರೀಕ್ಷಾ ಶುಲ್ಕ ಹಾಗೂ ದಂಡಶುಲ್ಕವನ್ನು ಒಂದೇ ಕಂತಿನಲ್ಲಿ ದಿನಾಂಕ:08/05/2023 ರಂದು ಪಾವತಿಸಿ, ಪರೀಕ್ಷಾ ಶುಲ್ಕ ಪಾವತಿಸಿದ ಅರ್ಜಿಗಳನ್ನು ಹಾಗೂ ಚಲನ್‌ನ ಮೂಲ ಪ್ರತಿಯನ್ನು ದಿನಾಂಕ:08/05/2023 ರಂದು ಕಡ್ಡಾಯವಾಗಿ ಜಿಲ್ಲಾ ಉಪನಿರ್ದೇಶಕರುಗಳ ಕಛೇರಿಗೆ ತಲುಪಿಸುವಂತೆ ಕ್ರಮ ವಹಿಸುವುದು. ಜಿಲ್ಲಾ ಉಪನಿರ್ದೇಶಕರುಗಳು ತಮ್ಮ ಜಿಲ್ಲಾ ವ್ಯಾಪ್ತಿಗೆ ಸಂಬಂಧಿಸಿದ ಕಾಲೇಜುಗಳಿಂದ ಸ್ವೀಕೃತಗೊಂಡ ಅರ್ಜಿಗಳನ್ನು ಕ್ರೋಢೀಕರಿಸಿ ದಿನಾಂಕ: 11/05/2023 ರಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಗೆ ತಲುಪಿಸಲು ಕ್ರಮ ವಹಿಸುವುದು. ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯ ಪೋರ್ಟಲ್‌ನಲ್ಲಿ ಪರೀಕ್ಷಾ ಶುಲ್ಕ ಪಾವತಿಸಿರುವ ಅನುತ್ತೀರ್ಣ ವಿದ್ಯಾರ್ಥಿಗಳ ಪರೀಕ್ಷಾ ವಿವರಗಳನ್ನು ಹಾಗೂ 2022ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ, 2022 ರ ಪೂರಕ ಪರೀಕ್ಷೆ ಮತ್ತು 2023ರ ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣಗೊಂಡಿರುವ ವಿಷಯಗಳ ಫಲಿತಾಂಶ ತಿರಸ್ಕರಿಸಿ 2023 ರ ಪೂರಕ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ವಿವರಗಳನ್ನು ಅಪ್‌ಡೇಟ್ ಮಾಡಲು **ದಿನಾಂಕ: 06/05/2023 ರ ಸಂಜೆ 5-30 ಗಂಟೆಯವರೆಗೆ ಅವಕಾಶ ಕಲ್ಪಿಸಲಾಗಿದೆ.** ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಇದರ ಸದುಪಯೋಗ ಪಡೆದುಕೊಳ್ಳಲು ಸೂಚಿಸಿದೆ. ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕವನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ.

**(ಮಾನ್ಯ ಅಧ್ಯಕ್ಷರ ಆದೇಶದ ಮೇರೆಗೆ)**

4/5/2023.

ನಿರ್ದೇಶಕರು, (ಪರೀಕ್ಷೆಗಳು)
ಕರ್ನಾಟಕ ಶಾಲಾ ಪರೀಕ್ಷೆ ಮತ್ತು
ಮೌಲ್ಯ ನಿರ್ಣಯ ಮಂಡಲಿ,
ಮಲ್ಲೇಶ್ವರಂ, ಬೆಂಗಳೂರು.

ಇವರಿಗೆ:-

1) ರಾಜ್ಯದ ಎಲ್ಲಾ ಜಿಲ್ಲೆಗಳ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರುಗಳಿಗೆ ಅಗತ್ಯ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಮೂಲಕ) ಅಗತ್ಯ ಕ್ರಮಕ್ಕಾಗಿ.
3) ಕಛೇರಿ ಪ್ರತಿ.